**3** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
<u>ಸಿ.ಸಿ.ನಂ. **313/2020**</u>

ದಿನಾಂಕಃ **19.02.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಸಿದ್ದೇಶ | ಚಾಸಾ-14, ಪ್ರಾಸ-13 |
| ತಂದೆಯ ಹೆಸರು | ಹುಲಿಯಪ್ಪ | |
| ವಯಸ್ಸು | 30 ವರ್ಷ | |
| ಉದ್ಯೋಗ | ಗಾರೆ ಕೆಲಸ | |
| ವಾಸ | ಕಾಮನಕೆರೆ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ಮೃತ ವ್ಯಕ್ತಿ ನನಗೆ ಗೊತ್ತಿಲ್ಲ. ಚಾಸಾ-13 ಮತ್ತು 15 ನನಗೆ ಗೊತ್ತು. ಸುಮಾರು 5-6 ವರ್ಷಗಳ ಹಿಂದೆ ಕಾಮನಕೆರೆ ಸರ್ಕಾರಿ ಶಾಲೆ ಬಳಿ ಬೈಕ್ ಅಪಘಾತವಾಗಿ ಬಿದ್ದಿದ್ದು ನಾನು, ಚಾಸಾ-13 ಮತ್ತು 15 ರವರು ನಡೆದುಕೊಂಡು ಹೋಗುತ್ತಿರುವಾಗ ಸ್ಥಳಕ್ಕೆ ಹೋದಾಗ ಸಾರ್ವಜನಿಕರು ಸೇರಿದ್ದರು. ಗಾಯಾಳುವಿನ ಹೆಸರನ್ನು ಕೇಳಲಾಗಿ ಕೃಷ್ಣಮೂರ್ತಿ ಬಿನ್ ಹನುಮಂತಪ್ಪ ಎಂದು ತಿಳಿಸಿರುತ್ತಾರೆ. ಆತನ ತಲೆಗೆ ತೀವ್ರ ಗಾಯವಾಗಿ ರಕ್ತ ಬರುತ್ತಿತ್ತು. ಅವರನ್ನು ನಾನು, ಚಾಸಾ-13 ಮತ್ತು 15 ರವರು ಗೂಡ್ಸ್ ವಾಹನದಲ್ಲಿ ಕರೆದುಕೊಂಡು ಹೋಗಿ ಕಡೂರಿನ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಿರುತ್ತೇವೆ. ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಡೂರಿನಿಂದ ಶಿವಮೊಗ್ಗಕ್ಕೆ ರವಾನಿಸಿದ್ದು ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾರೆ. ಅಪಘಾತ ಹೇಗಾಯಿತು ಯಾರ ತಪ್ಪಿನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ಈ ಸಂಬಂಧ ನಾನು ಪೋಲಿಸರಿಗೆ ಹೇಳಿಕೆ ನೀಡಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 06.12.2019 ರಂದು ಕೃಷ್ಣಮೂರ್ತಿ ರವರು ಕೆಎ-66 ಜೆ-2109 ರ ಬೈಕನ್ನು ಚಲಾಯಿಸಿಕೊಂಡು ಹೋಗುತ್ತಿದ್ದಾಗ ಯಾವುದೋ ಒಂದು ವಾಹನ ಡಿಕ್ಕಿಪಡಿಸಿ ಅಪಘಾತಪಡಿಸಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಅಜ್ಮಲ್ ಪಾಷಾ ರವರು ಕಾರಿನಲ್ಲಿ ವೇಗವಾಗಿ ಬಂದು ಡಿಕ್ಕಿಪಡಿಸಿ ಅಪಘಾತಪಡಿಸಿ ಕಾರನ್ನು ನಿಲ್ಲಿಸದೇ ಹೋಗಿರುವುದರಿಂದ ದೂರು ದಾಖಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಗೆ ದಿಃ 07.12.2019 ರ ಹೇಳಿಕೆಯನ್ನು ಓದಿ ಹೇಳಲಾಗಿ ಸಾಕ್ಷಿ ಅಲ್ಲಗಳೆದ ಹೇಳಿಕೆ

ಭಾಗವನ್ನು ನಿಪಿ-12 ಎಂದು ಗುರುತಿಸಲಾಯಿತು.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.